# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1329 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ)<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 17.12.2025 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು. |

<table>
<tr><th>ಕ್ರ.<br>ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೊಡಗು ಜಿಲ್ಲೆಯಲ್ಲಿನ ಪಶು ಆಸ್ಪತ್ರೆಗಳಲ್ಲಿ ಪಶುವೈದ್ಯರು ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳ ನೇಮಕಾತಿಗೆ ಕ್ರಮ ಕೈಗೊಳ್ಳಲಾಗಿದೆಯೇ (ಸಂಪೂರ್ಣ ವಿವರ ನೀಡುವುದು)</td><td>ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಕೊಡಗು ಜಿಲ್ಲೆಯ ಪಶುಆಸ್ಪತ್ರೆಗಳಲ್ಲಿ ಪಶುವೈದ್ಯರ ಮತ್ತು ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ / ~~ಹಾಗೂ~~ ಕೊಡಗು ಜಿಲ್ಲೆಯಲ್ಲಿ ಮಂಜೂರಾದ, ಭರ್ತಿ ಹಾಗೂ ಖಾಲಿ ಹುದ್ದೆಗಳ ವೃಂದವಾರು ವಿವರ ಈ ಕೆಳಕಂಡಂತೆ ಇರುತ್ತದೆ.
<table>
<tr><th>ಕ್ರ. ಸಂ.</th><th>ವೃಂದ</th><th>ಮಂಜೂರು</th><th>ಭರ್ತಿ</th><th>ಗುತ್ತಿಗೆ/ಹೊರ ಗುತ್ತಿಗೆ ಮೇಲೆ ಭರ್ತಿ</th><th>ಖಾಲಿ</th></tr>
<tr><td>1</td><td>ಎ</td><td>50</td><td>15</td><td>06</td><td>29</td></tr>
<tr><td>2</td><td>ಬಿ</td><td>06</td><td>02</td><td>00</td><td>04</td></tr>
<tr><td>3</td><td>ಸಿ</td><td>131</td><td>33</td><td>03</td><td>95</td></tr>
<tr><td>4</td><td>ಡಿ</td><td>118</td><td>10</td><td>48</td><td>60</td></tr>
<tr><td></td><td>ಒಟ್ಟು</td><td>305</td><td>60</td><td>57</td><td>188</td></tr>
</table>
ಇಲಾಖೆಯಲ್ಲಿ ಗ್ರೂಪ್ "ಎ" ವೃಂದದಲ್ಲಿ ಖಾಲಿ ಇರುವ 400 ಪಶುವೈದ್ಯಾಧಿಕಾರಿ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ ಹಾಗೂ 400 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.
ಕೊಡಗು ಜಿಲ್ಲೆಯಲ್ಲಿ ಖಾಲಿ ಇರುವ 34 ಪಶುವೈದ್ಯಾಧಿಕಾರಿ ಹುದ್ದೆಗಳಿಗೆ ಎದುರಾಗಿ 05 ಗುತ್ತಿಗೆ ಪಶುವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. </td></tr>
</table>

<table>
<tr><td></td><td></td><td>ಖಾಲಿ ಇರುವ 300 ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಗೆ ಪ್ರಸ್ತಾಪಿಸಲಾಗಿದೆ.<br><br>ಖಾಲಿ ಇರುವ 04 ವಾಹನ ಚಾಲಕರ ಹುದ್ದೆಗಳಿಗೆ ಎದುರಾಗಿ 02 ಹುದ್ದೆಗಳನ್ನು ಹಾಗೂ ಖಾಲಿ ಇರುವ 01 ಲ್ಯಾಬ್ ಟೆಕ್ನಿಷಿಯನ್ ಹುದ್ದೆಗೆ ಎದುರಾಗಿ ಒಂದು ಹುದ್ದೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಪಡೆಯಲಾಗಿದೆ.<br><br>ಗ್ರೂಪ್ "ಡಿ" ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಅನುಕಂಪದ ಪ್ರಕರಣಗಳಲ್ಲಿ ಭರ್ತಿ ಮಾಡಿಕೊಳ್ಳಲಾಗುತ್ತದೆ. ಕೊಡಗು ಜಿಲ್ಲೆಯಲ್ಲಿ ಖಾಲಿ ಇರುವ 108 ಹುದ್ದೆಗಳಿಗೆ ಎದುರಾಗಿ ಒಟ್ಟು 48 ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಸೇವೆಯನ್ನು ಪಡೆಯಲಾಗಿದೆ.</td></tr>
<tr><td>ಆ)</td><td>ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು;<br>ಸದರಿ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯರ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;</td><td>ಕೊಡಗು ಜಿಲ್ಲೆಯಲ್ಲಿ ಒಟ್ಟು 75 ಪಶುವೈದ್ಯಕೀಯ ಸಂಸ್ಥೆಗಳಿರುತ್ತವೆ. ಇವುಗಳಲ್ಲಿ ಪಶುವೈದ್ಯರ ಮಂಜೂರು, ಭರ್ತಿ ಹಾಗೂ ಖಾಲಿ ಹುದ್ದೆಗಳ ವಿವರ ಈ ಕೆಳಕಂಡಂತಿದೆ.<br><br><table><tr><th>ಮಂಜೂರು</th><th>ಭರ್ತಿ</th><th>ಗುತ್ತಿಗೆ/ಹೊರಗುತ್ತಿಗೆ ಮೇಲೆ ಭರ್ತಿ</th><th>ಖಾಲಿ</th></tr><tr><td>50</td><td>15</td><td>06</td><td>29</td></tr></table></td></tr>
<tr><td>ಇ)</td><td>ಜಾನುವಾರುಗಳು ಇತರೆ ಪ್ರಾಣಿಗಳ ಆರೈಕೆಗೆ ಹಾಗೂ ತುರ್ತು ಚಿಕಿತ್ಸೆಗಾಗಿ ತಾಲ್ಲೂಕುವಾರು ಕೈಗೊಂಡಿರುವ ಕ್ರಮಗಳಾವುವು?</td><td>ಜಾನುವಾರುಗಳ ಚಿಕಿತ್ಸೆಗೆ 75 ಪಶುವೈದ್ಯಕೀಯ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ತಾಂತ್ರಿಕ ಮತ್ತು ಅರೆತಾಂತ್ರಿಕ ಸಿಬ್ಬಂದಿಗಳು ಸೇವೆ ನೀಡುತ್ತಿದ್ದಾರೆ ಹಾಗೂ 05 ಸಂಚಾರಿ ಪಶುಚಿಕಿತ್ಸಾ ಘಟಕ ವಾಹನಗಳ ಮೂಲಕ (ವೆಟರಿನರಿ ಆಂಬ್ಯುಲೆನ್ಸ್) ಜಾನುವಾರುಗಳಿಗೆ ಸೂಕ್ತ ಹಾಗೂ ತುರ್ತು ಚಿಕಿತ್ಸೆ ಒದಗಿಸಲಾಗುತ್ತಿದೆ.</td></tr>
</table>

**ಪಸಂಮೀ 278 ಸಲೆವಿ 2025**

**(ಕೆ. ವೆಂಕಟೇಶ್)**
ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು